ರಾಣಿ ಚನ್ನಮ್ಮ ವಿಶ್ವವಿದ್ಯಾಲಯ
ವಿದ್ಯಾಸಂಗಮ, ರಾಷ್ಟ್ರೀಯ ಹೆದ್ದಾರಿ- 04, ಭೂತರಾಮನಹಟ್ಟಿ, ಬೆಳಗಾವಿ - 591156
(ನ್ಯಾಕ್ ಮಾನ್ಯತೆ B+ ಗ್ರೇಡ್ - 2021)

# RANI CHANNAMMA UNIVERSITY

Vidyasangama, National Highway – 04, Bhootaramanahatti, Belagavi – 591156
(NAAC Accredited with B+ Grade - 2021)

E-mail: rcuregistrar@gmail.com
registrar@rcub.ac.in

ಕುಲಸಚಿವರ ಕಾರ್ಯಾಲಯ
Office of the Registrar

Website: www.rcub.ac.in
Phone No.: 0831-2565234

ಕ್ರ.ಸಂ. : ರಾಚವಿ/ಬೆಳಗಾವಿ/ಕುಸಕಾ/ವಿ.ಮಂ/2022-23/ 1137

ದಿನಾಂಕ: 15 JUN 2022

## ಸುತ್ತೋಲೆ

ವಿಷಯ: 2022-23 ನೇ ಸಾಲಿನ ಸ್ನಾತಕ ಪ್ರವೇಶಾತಿಗೆ(Admission Module) ಸಂಬಂಧಿಸಿದಕ್ಕೆ UUCMS ನಲ್ಲಿ ಎಲ್ಲ ಮಾಹಿತಿಗಳನ್ನು ದಿನಾಂಕ: 17-06-2022 ರ ಒಳಗಾಗಿ ನಮೂದಿಸಿ, ಪೂರ್ಣಗೊಳಿಸುವ ಕುರಿತು.

ಉಲ್ಲೇಖ:1. ಸರಕಾರದ ಆದೇಶ ಪತ್ರ ಸಂಖ್ಯೆ: ಇಡಿ 34 ಇಜಿಒವಿ 2020(ಭಾಗ-2),ದಿನಾಂಕ:10-06-2022.
2. ಸರಕಾರದ ಆದೇಶ ಪತ್ರ ಸಂಖ್ಯೆ: ಇಡಿ 34 ಇಜಿಒವಿ 2020 ,ದಿನಾಂಕ:13-06-2022.
3. ರಾಚವಿ/ಬೆಳಗಾವಿ/ಸ್ನಾತಕ ವಿಭಾಗ/2022-23/1039, ದಿನಾಂಕ: 10-06-2022.
4. ರಾಚವಿ/ಬೆಳಗಾವಿ/ಸ್ನಾತಕ ವಿಭಾಗ/2022-23/1039/1, ದಿನಾಂಕ: 10-06-2022.

ಮೇಲ್ಕಾಣಿಸಿದ ವಿಷಯಕ್ಕೆ ಸಂಬಂಧಿಸಿದಕ್ಕೆ ಉಲ್ಲೇಖ-1 ಹಾಗೂ 2 ರ ಮೂಲಕ ಕರ್ನಾಟಕ ಸರಕಾರ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು, ಇವರು 2022-23 ನೇ ಸಾಲಿನ ಸ್ನಾತಕ ಹಾಗೂ ಸ್ನಾತಕೋತ್ತರ ಪ್ರವೇಶಾತಿ ಪ್ರಕ್ರಿಯೆಯನ್ನು ಕಡ್ಡಾಯವಾಗಿ UUCMS ಆನಲೈನ್ ಮುಖಾಂತರ ನಡೆಸಲು ಕ್ರಮ ಕೈಗೊಳ್ಳುವಂತೆ ಆದೇಶಿಸಿರುತ್ತಾರೆ. ಅದರಂತೆ ಉಲ್ಲೇಖ-2 ಹಾಗೂ 3 ರ ಪತ್ರದ ಮೂಲಕ ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಏರ್ಪಡಿಸಿದ ತರಬೇತಿ ಕಾರ್ಯಗಾರಕ್ಕೆ ಸ್ನಾತಕ ಮಹಾವಿದ್ಯಾಲಯಗಳ ಪ್ರಾಂಶುಪಾಲರು ಹಾಗೂ UUCMS ನೋಡಲ್ ಅಧಿಕಾರಿಗಳು ಸದರಿ ತರಬೇತಿ ಕಾರ್ಯಗಾರಕ್ಕೆ ಹಾಜರಾಗಿ ಮಾಹಿತಿ ಪಡೆದುಕೊಂಡಿರುತ್ತೀರಿ. ಆದಕಾರಣ ಉಲ್ಲೇಖ-1 ರ ಸರಕಾರದ ಆದೇಶದಂತೆ ದಿನಾಂಕ: 17-06-2022 ರ ಒಳಗಾಗಿ ಮಹಾವಿದ್ಯಾಲಯದ ಹಂತದಲ್ಲಿ ತಮ್ಮ UUCMS Login Page ನಲ್ಲಿ ಈ ಕೆಳಗಿನ ಕಾರ್ಯಗಳನ್ನು ಪೂರ್ಣಗೊಳಿಸಲು ತಿಳಿಸಲಾಗಿದೆ.

| Sl No | College Level |
|---|---|
| 1 | Setup Seat Allocation Method |
| 2 | Setup college level Admission Fee |
| 3 | Generate NSDL form |

ಮುಂದುವರೆದು, ಮೇಲ್ಕಾಣಿಸಿದ ಮಹಾವಿದ್ಯಾಲಯದ ಹಂತದಲ್ಲಿ ಕೈಗೊಳ್ಳಬೇಕಾದ ಕಾರ್ಯಗಳ ಕುರಿತು ಹೆಚ್ಚಿನ ಮಾಹಿತಿ ಬೇಕಾದಲ್ಲಿ ವಿಶ್ವವಿದ್ಯಾಲಯದಿಂದ ಈಗಾಗಲೆ ತಮಗೆ Admission Module ಗೆ ಸಂಬಂಧಿಸಿದ ಜಿಲ್ಲಾವಾರು ಸಿಬ್ಬಂದಿಗಳ ದೂರವಾಣಿ ಸಂಖ್ಯೆಗಳಿಗೆ ಸಂಪರ್ಕಿಸುವಂತೆ ತಿಳಿಸಿದೆ. ಇವುಗಳ ಜೊತೆಗೆ ಸಮಗ್ರ ವಿಶ್ವವಿದ್ಯಾಲಯ ಮತ್ತು ಕಾಲೇಜು ನಿರ್ವಹಣಾ ವ್ಯವಸ್ಥೆ(UUCMS) ಹೋಮ್ ಪೇಜ್‌ನಲ್ಲಿರುವ ಸಹಾಯವಾಣಿ ಸಂಖ್ಯೆಗಳು ಹಾಗೂ ಇ-ಮೇಲ್ ಬಳಸಿ ತಮಗಿರುವ ಗೊಂದಲಗಳಿಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ.

ಕುಲಸಚಿವರು
ಕುಲಸಚಿವರು
ರಾಣಿ ಚನ್ನಮ್ಮ ವಿಶ್ವವಿದ್ಯಾಲಯ
ವಿದ್ಯಾ ಸಂಗಮ
ಬೆಳಗಾವಿ-೫೯೧೧೫೬, ಕರ್ನಾಟಕ

ಇವರಿಗೆ,
ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ
ಎಲ್ಲ ಸ್ನಾತಕ ಮಹಾವಿದ್ಯಾಲಯಗಳ ಪ್ರಾಚಾರ್ಯರು
ಬೆಳಗಾವಿ, ಬಾಗಲಕೋಟ ಹಾಗೂ ವಿಜಯಪುರ ಜಿಲ್ಲೆಗಳು

ಅಡಕ: 1. ಸರಕಾರದ ಆದೇಶದ ಪತ್ರಗಳು. 2. Manual- College Admin. 3. 2022 Online Application Student.

# ಕರ್ನಾಟಕ ಸರ್ಕಾರ

ಸಂಖ್ಯೆ:ಇಡಿ34ಇಜಿಜಿವಿ 2020

ಕರ್ನಾಟಕ ಸರ್ಕಾರ ಸಚಿವಾಲಯ,
ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿ ಕಟ್ಟಡ,
ಬೆಂಗಳೂರು,ದಿನಾಂಕ:13-06-2022.

ಇಂದ,

ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ,
ಬೆಂಗಳೂರು - 560 001.

ಇವರಿಗೆ,

1. ಆಯುಕ್ತರು ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
2. ಕುಲಸಚಿವರು, ಬೆಂಗಳೂರು ವಿಶ್ವವಿದ್ಯಾಲಯ, ಬೆಂಗಳೂರು.
3. ಕುಲಸಚಿವರು, ಬೆಂಗಳೂರು ಕೇಂದ್ರ ವಿಶ್ವವಿದ್ಯಾಲಯ, ಬೆಂಗಳೂರು.
4. ಕುಲಸಚಿವರು, ಬೆಂಗಳೂರು ಉತ್ತರ ವಿಶ್ವವಿದ್ಯಾಲಯ, ಬೆಂಗಳೂರು.
5. ಕುಲಸಚಿವರು, ಮೈಸೂರು ವಿಶ್ವವಿದ್ಯಾಲಯ, ಮೈಸೂರು.
6. ಕುಲಸಚಿವರು, ಕನ್ನಡ ವಿಶ್ವವಿದ್ಯಾಲಯ, ಹಂಪಿ.
7. ಕುಲಸಚಿವರು, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
8. ಕುಲಸಚಿವರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಗುಲ್ಬರ್ಗಾ
9. ಕುಲಸಚಿವರು, ಮಂಗಳೂರು ವಿಶ್ವವಿದ್ಯಾಲಯ, ಮಂಗಳೂರು.
10. ಕುಲಸಚಿವರು, ಕುವೆಂಪು ವಿಶ್ವವಿದ್ಯಾಲಯ, ಶಿವಮೊಗ್ಗ.
11. ಕುಲಸಚಿವರು, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು.
12. ಕುಲಸಚಿವರು, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ, ವಿಜಯಪುರ.
13. ಕುಲಸಚಿವರು, ತುಮಕೂರು ವಿಶ್ವವಿದ್ಯಾಲಯ, ತುಮಕೂರು.
14. ಕುಲಸಚಿವರು, ದಾವಣಗೆರೆ ವಿಶ್ವವಿದ್ಯಾಲಯ, ದಾವಣಗೆರೆ
15. ಕುಲಸಚಿವರು, ರಾಣಿಚನ್ನಮ್ಮ ವಿಶ್ವವಿದ್ಯಾಲಯ, ಬೆಳಗಾವಿ.
16. ಕುಲಸಚಿವರು, ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ, ಬಳ್ಳಾರಿ.
17. ಕುಲಸಚಿವರು, ವಿಶ್ವೇಶ್ವರಾಯ ತಾಂತ್ರಿಕ ವಿಶ್ವವಿದ್ಯಾಲಯ, ಬೆಳಗಾವಿ.
18. ಕುಲಸಚಿವರು, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಬೆಂಗಳೂರು.
19. ಕುಲಸಚಿವರು, ಕರ್ನಾಟಕ ರಾಜ್ಯ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ, ಮೈಸೂರು.
20. ಕುಲಸಚಿವರು, ಜಾನಪದ ವಿಶ್ವವಿದ್ಯಾಲಯ, ಗೊಟಗೋಡಿ, ಹಾವೇರಿ.
21. ಕುಲಸಚಿವರು, ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು

22. ಕುಲಸಚಿವರು, ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ

23. ರಾಯಚೂರು ವಿಶ್ವವಿದ್ಯಾಲಯ, ರಾಯಚೂರು

24. ಕುಲಸಚಿವರು, ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು

ಮಾನ್ಯರೇ,

ವಿಷಯ: ಉನ್ನತ ಶಿಕ್ಷಣ ಇಲಾಖೆಯ 2022-23 ನೇ ಸಾಲಿನ ಪ್ರಥಮ ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳ ಪ್ರವೇಶಾತಿಯ ಆನ್‌ಲೈನ್ ಲಿಂಕ್ https://uucms.karnataka.gov.in/ ಅನ್ನು ಆಯಾ ವಿಶ್ವವಿದ್ಯಾಲಯ ಮತ್ತು ಕಾಲೇಜುಗಳ ವೆಬ್‌ಸೈಟ್‌ನಲ್ಲಿ ಅಳವಡಿಸುವ ಬಗ್ಗೆ.

ಉಲ್ಲೇಖ: ಸರ್ಕಾರಿ ಆದೇಶ ಸಂಖ್ಯೆ: ಇಡಿ/34/ಇಜಿಬಿವಿ 2020(ಭಾಗ-2), ದಿನಾಂಕ:10-06-2022

* * * * *

ಮೇಲ್ಕಂಡ ವಿಷಯಕ್ಕೆ ಹಾಗೂ ಉಲ್ಲೇಖಿತ ಆದೇಶದಲ್ಲಿ ತಿಳಿಸಿದಂತೆ, 2022-23 ನೇ ಸಾಲಿನ ಪ್ರಥಮ ಪದವಿ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳ ಪ್ರವೇಶಾತಿಯು ಆನ್‌ಲೈನ್ ಮುಖಾಂತರ ನಡೆಸಲು ಕ್ರಮ ಕೈಗೊಳ್ಳುವಂತೆ ಆದೇಶಿಸಲಾಗಿದ್ದು, ಸದರಿ ಆದೇಶ, ಮಾಹಿತಿ ಮತ್ತು ಆನ್‌ಲೈನ್ ಪ್ರವೇಶಾತಿಯ ವೆಬ್‌ಸೈಟ್ ವಿಳಾಸ https://uucms.karnataka.gov.in/ ಅನ್ನು ಕಾಲೇಜು ಶಿಕ್ಷಣ ಇಲಾಖೆ, ವಿಶ್ವವಿದ್ಯಾಲಯಗಳು ಮತ್ತು ವಿಶ್ವವಿದ್ಯಾಲಯಗಳ ಕಾಲೇಜುಗಳ ವೆಬ್‌ಸೈಟ್‌ನಲ್ಲಿ ಲಿಂಕ್ ಮಾಡಲು ಹಾಗೂ ಪ್ರವೇಶಾತಿಯ ವಿವರಗಳನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸಂಬಂಧಪಟ್ಟ ವಿಶ್ವವಿದ್ಯಾಲಯಗಳು ಮತ್ತು ಕಾಲೇಜುಗಳಿಗೆ ಸೂಚಿಸುವಂತೆ ತಮ್ಮನ್ನು ಈ ಮೂಲಕ ಕೋರಲಾಗಿದೆ.

ತಮ್ಮ ವಿಶ್ವಾಸಿ

(ಶೀತಲ್ ಎಂ. ಹಿರೇಮಠ)
ಸರ್ಕಾರದ ಅಧೀನ ಕಾರ್ಯದರ್ಶಿ
ಉನ್ನತ ಶಿಕ್ಷಣ ಇಲಾಖೆ
(ವಿಶ್ವವಿದ್ಯಾಲಯ -1)

ಪ್ರತಿ:

1. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
2. ಉನ್ನತ ಶಿಕ್ಷಣ ಇಲಾಖೆಯಡಿಯಲ್ಲಿ ಬರುವ ಕಾಲೇಜುಗಳ ಪ್ರಾಂಶುಪಾಲರು.
3. ಮಾನ್ಯ ಉನ್ನತ ಶಿಕ್ಷಣ ಸಚಿವರ,ಆಪ್ತ ಕಾರ್ಯದರ್ಶಿರವರರು, ವಿಕಾಸಸೌಧ.
4. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಯವರು, ಉನ್ನತ ಶಿಕ್ಷಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಜಂಟಿ ಕಾರ್ಯದರ್ಶಿರವರು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
6. ವಿಶೇಷಾಧಿಕಾರಿ, ಇ-ಆಡಳಿತ ಘಟಕ, ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.

# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳ ಸಂಯೋಜನೆ, ಹೊಸ ಕೋರ್ಸು ಪ್ರಾರಂಭ, ಸಂಯೋಜನೆ ಮುಂದುವರಿಕೆ, ಖಾಯಂ ಸಂಯೋಜನೆ ಇತ್ಯಾದಿಗಳ ಆನ್ ಲೈನ್ ಮುಖಾಂತರ ಸಲ್ಲಿಸುವ ಸಂಬಂಧ ವೇಳಾಪಟ್ಟಿ ನಿಗಧಿಪಡಿಸುವ ಬಗ್ಗೆ.

**ಓದಲಾಗಿದೆ:** ಸರ್ಕಾರದ ಆದೇಶದ ಸಂಖ್ಯೆ: ಇಡಿ 34 ಇಜಿಓವಿ ಭಾಗ 2, ಬೆಂಗಳೂರು, ದಿನಾಂಕ: 26.4.2022.

*******

## ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ: 26.4.2022 ರ ಆದೇಶದಲ್ಲಿ 2022-23ನೇ ಶೈಕ್ಷಣಿಕ ಸಾಲಿಗೆ ರಾಷ್ಟ್ರೀಯ ಮಾಹಿತಿ ಸಂಸ್ಥೆ (ಎನ್.ಐ.ಸಿ) ಮುಖಾಂತರವೇ ಆನ್ ಲೈನ್ ಸಂಯೋಜನಾ ತಂತ್ರಾಂಶದ ಅರ್ಜಿಯನ್ನು ರಾಷ್ಟ್ರೀಯ ಶಿಕ್ಷಣ ನೀತಿ-2020 ರಂತೆ ಆಹ್ವಾನಿಸಲು ಉನ್ನತ ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಎಲ್ಲಾ ವಿಶ್ವವಿದ್ಯಾಲಯಗಳಡಿ ಬರುವ ಸಂಯೋಜಿತ ಕಾಲೇಜುಗಳ ಸಂಯೋಜನಾ ಪ್ರಕ್ರಿಯೆಗಳಾದ OPENING NEW COLLEGES, EXTENSION OF EXISTING AFFILIATION, CONTINUATION OF AFFILIATION, PERMANENT AFFILIATION, CHANGE OR ADDITION OF SUBJECT, DIVISION OF FACULTY, INCREASE OF INTAKE, CHANGE OF NAME, CLOSURE AND WITHDRAWAL OF A COLLEGE, LOCAL INQUIRY COMMITTEE FORMATION AND TRANSFER OF MANAGEMENT ಸಂಬಂಧಿಸಿದ ವಿವರಗಳನ್ನು ಆನ್‌ಲೈನ್ ಅರ್ಜಿಗಳಲ್ಲಿ ಭರ್ತಿ ಮಾಡಿ ವಿಶ್ವವಿದ್ಯಾಲಯಗಳು ನೇಮಿಸುವ ಸ್ಥಳೀಯ ವಿಚಾರಣಾ ಸಮಿತಿಯು ಪರಾಮರ್ಶಿಸಿ ಸಮಿತಿಯ ಶಿಫಾರಸ್ಸನ್ನು ಆನ್ ಲೈನ್ ಮುಖಾಂತರವೇ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿ, ನಂತರ ವಿಶ್ವವಿದ್ಯಾಲಯವು ತನ್ನ ಶಿಫಾರಸ್ಸಿನೊಂದಿಗೆ ಸರ್ಕಾರಕ್ಕೆ ಸಂಯೋಜನಾ ಪ್ರಸ್ತಾವನೆಯನ್ನು ಸಲ್ಲಿಸುವಂತೆ ಆದೇಶಿಸಲಾಗಿದೆ.

2022-23ನೇ ಶೈಕ್ಷಣಿಕ ಸಾಲಿನಿಂದ ವಿಶ್ವವಿದ್ಯಾಲಯಗಳು ಮತ್ತು ವಿಶ್ವವಿದ್ಯಾಲಯಗಳ ವ್ಯಾಪ್ತಿಯ ಸಂಯೋಜಿತ ಕಾಲೇಜುಗಳಲ್ಲಿ ಪ್ರಥಮ ವರ್ಷದ ಪದವಿ ತರಗತಿಗಳಿಗೆ ಪ್ರವೇಶಾತಿಯನ್ನು ಇಲಾಖೆಯ ಯುಯುಸಿಎಂಎಸ್ (UUCMS) ತಂತ್ರಾಂಶದಲ್ಲಿ ಆನ್‌ಲೈನ್ ಮುಖಾಂತರವೇ ಈ ಕೆಳಕಂಡ ಕ್ರಮಾನುಗತಿಯಲ್ಲಿ ನಡೆಸಲಾಗುತ್ತದೆ.

1. Online Affiliation ತಂತ್ರಾಂಶದಲ್ಲಿ ಅನುಮೋದನೆಯಾಗಿರುವ, ವಿಶ್ವವಿದ್ಯಾಲಯವಾರು, ಕಾಲೇಜುವಾರು ಪದವಿ, ವಿಷಯ ಮತ್ತು ಇನ್‌ಟೇಕ್ ದತ್ತಾಂಶವನ್ನುUUCMS ಪ್ರವೇಶಾತಿ ನಮೂನೆಗೆ ಲಿಂಕ್ ಮಾಡಲಾಗಿದೆ.
2. ಸದರಿ ದತ್ತಾಂಶವನ್ನು ವಿಶ್ವವಿದ್ಯಾಲಯದ ಸಂಬಂದಿಸಿದ ಅಧಿಕಾರಿಯು ಅನುಮೋದಿಸುವುದರ ಜೊತೆಗೆ, ಪ್ರವೇಶಾತಿ ಸಮಯದಲ್ಲಿ ಸಂಯೋಜಿತ ಕಾಲೇಜುಗಳ ವಿದ್ಯಾರ್ಥಿಗಳಿಂದ ಪಡೆಯುವ ವಿಶ್ವವಿದ್ಯಾಲಯ ಶುಲ್ಕ, ಕ್ಯಾಲೆಂಡರ್ ಆಫ್ ಈವೆಂಟ್ಸ್ ಗಳನ್ನು ಸೆಟ್ ಮಾಡಲಾಗುತ್ತದೆ.
3. Affiliationನಲ್ಲಿ ಅನುಮೋದನೆಗೊಂಡಿರುವ ಹೊಸ ಕಾಲೇಜು ಮತ್ತು ಹೊಸ ಕೋರ್ಸ್‌ಗಳನ್ನು ವಿಶ್ವವಿದ್ಯಾಲಯದ ಸಂಬಂದಿಸಿದ ಅಧಿಕಾರಿಯು UUCMS ಪೋರ್ಟಲ್‌ನಲ್ಲಿ ಸೇರ್ಪಡೆಗೊಳಿಸಿ, ಪರಿಶೀಲಿಸಿ ಅನುಮೋದಿಸಲಾಗುತ್ತದೆ.
4. ತದನಂತರ ಸದರಿ ವಿಶ್ವವಿದ್ಯಾಲಯಗಳ ಸಂಯೋಜಿತ ಕಾಲೇಜುಗಳಲ್ಲಿ ವಿಶ್ವವಿದ್ಯಾಲಯ ಅನುಮೋದಿಸಿರುವ ಕಾಲೇಜುವಾರು ಪದವಿಗಳು, ವಿಷಯ ಮತ್ತು ಇನ್‌ಟೇಕ್ ದತ್ತಾಂಶವನ್ನು ಪರಿಶೀಲಿಸುತ್ತಾರೆ, ವ್ಯತ್ಯಾಸ ಕಂಡುಬಂದಲ್ಲಿ ವಿಶ್ವವಿದ್ಯಾಲಯವನ್ನು ಸಂಪರ್ಕಿಸಿ ಸರಿಪಡಿಸಿಕೊಳ್ಳಬಹುದು.
5. ಕಾಲೇಜುಗಳು ತಮ್ಮ ಹಂತದಲ್ಲಿ ಪದವಿಗಳು, ವಿಷಯಗಳು, ಕೆಟಗರಿ ಇತ್ಯಾದಿಗಳಿಗನುಗುಣವಾಗಿ ವಿದ್ಯಾರ್ಥಿಗಳಿಂದ ಪಡೆಯುವ ಶುಲ್ಕಗಳನ್ನು ಪೋರ್ಟಲ್‌ನಲ್ಲಿ ಸೆಟ್ ಮಾಡುತ್ತಾರೆ ಹಾಗೂ ತಮ್ಮ ತಮ್ಮ ಕಾಲೇಜುಗಳಲ್ಲಿನ ಪ್ರವೇಶಾತಿ ಮಾದರಿ, ಕ್ಯಾಲೆಂಡರ್ ಆಫ್ ಈವೆಂಟ್ಸ್ ಗಳನ್ನು ಸೆಟ್ ಮಾಡಿಕೊಳ್ಳಬಹುದು.



Scanned with CamScanner

6. ಕಾಲೇಜುಗಳ ಹಂತದಲ್ಲಿ ವಿದ್ಯಾರ್ಥಿಗಳು ಪಾವತಿಸುವ ಆನ್‌ಲೈನ್ ಶುಲ್ಕವನ್ನು ನಿಗದಿತ ಕಾಲೇಜುಗಳ ನಿಗದಿತ ಬ್ಯಾಂಕ್‌ಗಳಲ್ಲಿ ಪಾವತಿಸಲು ಭಾರತ ಸರ್ಕಾರದ NSDL ರವರ PayGovನೊಂದಿಗೆ ನೊಂದಾಯಿಸಲು ಸೂಕ್ತ ಕ್ರಮವಹಿಸುವುದು.
7. ತದನಂತರ ವಿದ್ಯಾರ್ಥಿಗಳು ಪೋರ್ಟಲ್‌ನಲ್ಲಿ ಸೂಕ್ತ ಕಾಲೇಜಿನಲ್ಲಿ ಪದವಿ ಮತ್ತು ವಿಷಯಗಳನ್ನು ಆಯ್ಕೆ ಮಾಡಿಕೊಂಡು UUCMS ಮುಖಾಂತರ ಪ್ರವೇಶಾತಿ ಶುಲ್ಕವನ್ನು ಪಾವತಿಸಿ ಪ್ರವೇಶಾತಿಯನ್ನು ಪಡೆಯುತ್ತಾರೆ.

ಸಂಬಂಧ ಪ್ರಸಕ್ತ ಸಾಲಿನಲ್ಲಿ ಮೇಲೆ ಸೂಚಿಸಿದ ಎಲ್ಲಾ ಅಂಶಗಳನ್ನು ಒಳಗೊಂಡಿರುವ ಪ್ರವೇಶಾತಿ ಮಾದರಿ UUCMS ಸಿದ್ಧಪಡಿಸಲಾಗಿದೆ. 2022-23 ನೇ ಸಾಲಿನ ದ್ವಿತೀಯ ಪಿ.ಯು.ಸಿ. ಫಲಿತಾಂಶವು ಜೂನ್‌ನ 3ನೇ ವಾರ ಹೊರಬೀಳುವ ಸೂಚನೆಯಿರುವ ಹಿನ್ನೆಲೆಯಲ್ಲಿ, ಆನ್‌ಲೈನ್ ಪ್ರವೇಶಾತಿಯ ಪ್ರಕ್ರಿಯೆಯನ್ನು ಕೈಗೊಳ್ಳಲು ಈ ಕೆಳಕಂಡ ಆದೇಶ.

**<u>ಸರ್ಕಾರಿ ಆದೇಶ ಸಂಖ್ಯೆ: ಇಡಿ 34 ಇಜಿಒವಿ 2020 (ಭಾಗ-2),</u>**

**<u>ಬೆಂಗಳೂರು, ದಿನಾಂಕ: 10.06.2022</u>**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, 2022-23 ನೇ ಸಾಲಿನ ದ್ವಿತೀಯ ಪಿ.ಯು.ಸಿ ಫಲಿತಾಂಶವು ಮೂರನೇ ವಾರದಲ್ಲಿ ಪ್ರಕಟಗೊಳ್ಳುವ ಹಿನ್ನೆಲೆಯಲ್ಲಿ, ಪ್ರಸಕ್ತ ಸಾಲಿನಿಂದ ಆನ್‌ಲೈನ್ ಸಂಯೋಜನೆ ಮತ್ತು ಪ್ರವೇಶಾತಿ ಪ್ರಕ್ರಿಯೆಯನ್ನು ಸರ್ಕಾರ ಸಿದ್ಧಪಡಿಸಿರುವ NIC/UUCMS ತಂತ್ರಾಂಶದ ಮುಖಾಂತರ ಕ್ರಮಕೈಗೊಳ್ಳುವ ಸಲುವಾಗಿ ಈ ಕೆಳಕಂಡ ದಿನಾಂಕಗಳನ್ನು ಪಾಲಿಸುವಂತೆ ಆದೇಶಿಸಿದೆ.

| Sl. No | Particular | Date |
|---|---|---|
| 1 | Training to Registrar Admin and Nodal Officers on admission | 9th June 2022 |
| 2 | Training (Virtual)to Principals of affiliated colleges | 10th & 11th June 2022 |
| 3 | Affiliation approval at Universities (Syndicate Approval) | 15th June 2022 |
| 4 | Affiliation approval at Government | 20th June 2022 |
| 5 | UUCMS for universities level setup | 10th June 2022 |
| 6 | UUCMS for college level setup | 13th June 2022 |
| 7 | PayGov account setup by Colleges | By 17th June 2022 |
| 8 | Portal Available for student | 18th June 2022 |

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ,**

**( ಶೀತಲ್ ಎಂ. ಹಿರೇಮಠ )**
ಸರ್ಕಾರದ ಅಧೀನ ಕಾರ್ಯದರ್ಶಿ,
ಉನ್ನತ ಶಿಕ್ಷಣ ಇಲಾಖೆ
(ವಿಶ್ವವಿದ್ಯಾಲಯಗಳು-1).

**<u>ಪ್ರತಿಯನ್ನು:</u>**

1. ಆಯುಕ್ತರು, ಕಾಲೇಜು ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.



Scanned with CamScanner

2. ಉಪಾಧ್ಯಕ್ಷರು, ಕರ್ನಾಟಕ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
3. ಕುಲಪತಿಗಳು, ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
4. ಕುಲಸಚಿವರುಗಳು, ಉನ್ನತ ಶಿಕ್ಷಣ ಇಲಾಖೆ ವ್ಯಾಪ್ತಿಯ ಸಾರ್ವಜನಿಕ ವಿಶ್ವವಿದ್ಯಾಲಯಗಳು, ಕರ್ನಾಟಕ.
5. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು-560 001.
6. ಕಾರ್ಯ ನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್, ಬೆಂಗಳೂರು.
7. ಗೌರವಾನ್ವಿತ ರಾಜ್ಯಪಾಲರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
8. ಕಾರ್ಯದರ್ಶಿಗಳು, ಮಾನ್ಯ ಉಪಮುಖ್ಯಮಂತ್ರಿಗಳು ಮತ್ತು ಉನ್ನತ ಶಿಕ್ಷಣ ಸಚಿವರು, ಕರ್ನಾಟಕ ಸರ್ಕಾರ.
9. ಮಾನ್ಯ ಉನ್ನತ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ.
10. ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ.
11. ಸರ್ಕಾರದ ಉಪ ಕಾರ್ಯದರ್ಶಿಗಳು (ವಿಶ್ವವಿದ್ಯಾಲಯ), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
12. ಸರ್ಕಾರದ ಉಪ ಕಾರ್ಯದರ್ಶಿಗಳು (ಕಾಲೇಜು), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
13. ಸರ್ಕಾರದ ಉಪ ಕಾರ್ಯದರ್ಶಿಗಳು (ತಾಂತ್ರಿಕ ಶಿಕ್ಷಣ ಮತ್ತು ಯೋಜನೆ), ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
14. ವಿಶೇಷಾಧಿಕಾರಿಗಳು, ಇ-ಆಡಳಿತ ಘಟಕ, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು.
15. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿ.



Scanned with CamScanner